ಅಭಿವೃದ್ಧಿ ಯೋಜನೆಗಳು

1519(1393), ಶ್ರೀ ಪಾಟೀಲ್ ಎ.ಎಸ್.(ನಡಹಳ್ಳಿ) (ದೇವರ ಹಿಪ್ಪರಗಿ)

ಅ) 2013–14ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆ ದೇವರ ಹಿಪ್ಪರಗಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಉನ್ನತ ಶಿಕ್ಷಣ ಇಲಾಖೆಯಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆ; (ವಿವರ ನೀಡುವುದು);

ಆ) ಪ್ರಸ್ತುತ ಚಾಲ್ತಿಯಲ್ಲಿರುವ ಅಭಿವೃದ್ಧಿ ಕಾಮಗಾರಿಗಳು ಯಾವ ಹಂತದಲ್ಲಿವೆ;

ಇ) ಸದರಿ ಕಾಮಗಾರಿಗಳಿಗೆ ನೀಡಿರುವ ಅನುದಾನವೆಷ್ಟು?

ಶ್ರೀ ಆರ್.ವಿ.ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಿಜಾಪುರ ಜಿಲ್ಲೆಯ ದೇವರ ಹಿಪ್ಪರಗಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು 2014–15ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗಿದ್ದು, ನಿವೇಶನ ಲಭ್ಯವಾದ ನಂತರ ಕಟ್ಟಡ ಹಾಗೂ ಇತರೇ ಮೂಲಭೂತ ಕಾಮಗಾರಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಆ) ಯಾವುದೇ ಕಾಮಗಾರಿಗಳು ಚಾಲ್ತಿಯಲ್ಲಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಅಭಿವೃದ್ಧಿ ಕಾಮಗಾರಿಗಳು

1520(1394), ಶ್ರೀ ಪಾಟೀಲ್ ಎ.ಎಸ್.(ನಡಹಳ್ಳಿ) (ದೇವರ ಹಿಪ್ಪರಗಿ)

ಅ) 2013–14ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು);

ಆ) 2014–15ನೇ ಸಾಲಿಗೆ ಸದರಿ ಇಲಾಖೆಯಿಂದ ಬಿಜಾಪುರ ಜಿಲ್ಲೆಯಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗುವುದು; (ಕಾಮಗಾರಿ ಹೆಸರಿನೊಂದಿಗೆ ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) **ಸಾಮಾನ್ಯ ಯೋಜನೆ:**

ಬಿಜಾಪುರ ಜಿಲ್ಲೆಗೆ ಸಂಬಂಧಿಸಿದಂತೆ ವಿವಿಧ ಸ್ಥಳಗಳಲ್ಲಿ ಸಾಂಸ್ಕೃತಿಕ ಭವನ/ರಂಗಮಂದಿರ ನಿರ್ಮಾಣ ಮಾಡಲು ಬೇಡಿಕೆಗಳು ಬಂದಿದ್ದು, ಅದರಂತೆ ಕ್ರಮ ಕೈಗೊಳ್ಳಲಾಗಿದೆ. (ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ).

ವಿಶೇಷ ಘಟಕ ಯೋಜನೆ:

2013–14ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಮಹರ್ಷಿ ವಾಲ್ಮೀಕಿ ಸಾಂಸ್ಕೃತಿಕ ಸಂರಕ್ಷಣಾ ಕಲಾ ಸಂಘ(ರಿ) ಮುದ್ದಾಪುರ, ಜಿಲ್ಲಾ ಬಿಜಾಪುರ ಇವರಿಗೆ ಸಾಂಸ್ಕೃತಿಕ ಭವನ ನಿರ್ಮಾಣಕ್ಕೆ ₹ 5,00,000/–ಗಳ ಧನಸಹಾಯ ನೀಡಲಾಗಿದೆ.

ವಿಧಾನಸಭಾ ಕ್ಷೇತ್ರವಾರು ಯಾವುದೇ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ.

ಆ) 2014–15ನೇ ಸಾಲಿಗೆ ಸಂಬಂಧಿಸಿದಂತೆ ಇಲಾಖೆ ಕ್ರಿಯಾಯೋಜನೆಯನ್ನು ರೂಪಿಸಿದ್ದು, ಬಯಲು ರಂಗಮಂದಿರ, ಸಾಂಸ್ಕೃತಿಕ ಭವನ ಅಥವಾ ಸಾಂಸ್ಕೃತಿಕ ಮಂದಿರ ನಿರ್ಮಾಣಕ್ಕೆ ಅವಕಾಶ ಕಲ್ಪಿಸಿಕೊಂಡಿದ್ದು, ಮಾರ್ಗಸೂಚಿಗಳನ್ವಯ ಆಯವ್ಯಯಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1394ಕ್ಕೆ ಅನುಬಂಧ

ಕ್ರ. ಸಂ.	ಹೆಸರು ಮತ್ತು ವಿಳಾಸ	ಬಿಡುಗಡೆಯಾದ ಮೊತ್ತ
1	ಬಿಜಾಪುರ ಜಿಲ್ಲೆ ಬಸವನ ಬಾಗೇವಾಡಿ ಪಟ್ಟಣದಲ್ಲಿ ರಂಗಮಂದಿರ ನಿರ್ಮಾಣ	₹ 50.00 ಲಕ್ಷ
2	ಬಿಜಾಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕು ಬೇನಾಳ (ಎನ್.ಹೆಚ್.) ಗ್ರಾಮದಲ್ಲಿ ರಂಗಮಂದಿರ ನಿರ್ಮಾಣ	₹ 10.00 ಲಕ್ಷ
3	ಬಿಜಾಪುರ ಜಿಲ್ಲೆಯ ಶ್ರೀ ಶಿರಸಂಗಿ ಲಿಂಗರಾಜ ವಿವಿಧೋದ್ದೇಶ ಸಂಸ್ಥೆಯಿಂದ ಸಾಂಸ್ಕೃತಿಕ ಭವನ ನಿರ್ಮಾಣ.	₹ 25.00 ಲಕ್ಷ
4	ಬಿಜಾಪುರ ತಾಲ್ಲೂಕು ಶ್ರೀ ಖಂಡೇಶ್ವರ ಜಾನಪದ ಕಲಾವಿದರ ಸಂಘ, ಕನ್ನೂರ, ಸಾಂಸ್ಕೃತಿಕ ಭವನ ನಿರ್ಮಾಣ	₹ 5.00 ಲಕ್ಷ
5	ಬಿಜಾಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕಿನ ಮುಳವಾಡ ಗ್ರಾಮದಲ್ಲಿ ರಂಗಮಂದಿರ ನಿರ್ಮಾಣ	₹ 10.00 ಲಕ್ಷ
6	ಅರಿಹಂತ ಚಾರಿಟೇಬಲ್ ಟ್ರಸ್ಟ್ (ರಿ), ಮುದ್ದೇಬಿಹಾಳ, ಬಿಜಾಪುರ ಜಿಲ್ಲೆ, ಸಾಂಸ್ಕೃತಿಕ ಭವನ ನಿರ್ಮಾಣ	₹ 5.00 ಲಕ್ಷ
	ಒಟ್ಟು	**₹ 105.00 ಲಕ್ಷಗಳು**